ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 18–01–2019

# SPECIAL MEDIA INVITATION

The Director of Indian Council for Agricultural Research - Indian Institute of Horticultural Research Dr M R Dinesh has desired to address a Press Conference on January 19 at 12-00 Noon at the Institute's Campus at Hesaraghatta in Bengaluru.

The Institute has made vehicle arrangements to take Media Persons to the venue. The vehicle will leave at 10-15 A M from Vaartha Soudha, Department of Information and Public Relations Premises, No. 17, Bhagawan Mahaveer Road, Bengaluru - 560 001 and bring them back after the function.

Media Persons, representing Electronic and Print Media, are requested to kindly attend this *Luncheon Press Conference,* at which highlights of the NATIONAL HORTICULTURAL FAIR on *Horticulture for Promoting Rural Prosperity*, scheduled to be held from January 23 to 25 at the Campus, will be disclosed. There will be a Field Visit to the Horticultural Garden - which has many important features.

**D. P. MURALIDHAR,**
**DEPUTY DIRECTOR**
**(NEWS)**

# <u>ಪತ್ರಿಕಾ ಆಮಂತ್ರಣ</u>

1. ಸಾವಯವ ಮತ್ತು ಸಿರಿಧಾನ್ಯಗಳು 2019 ಅಂತರರಾಷ್ಟ್ರೀಯ ವಾಣಿಜ್ಯ ಮೇಳ
   **<u>ಗ್ರಾಹಕ ಸಂಪರ್ಕ ಸಭೆ:</u>**

   **<u>ಉದ್ಘಾಟನೆ:</u>**

   ಕೆ. ಜೆ. ಜಾರ್ಜ್,
   ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವರು,

   **ಪ್ರದರ್ಶಕರ ಕ್ಯಾಟಲಾಗ್ ಬಿಡುಗಡೆ:**

   ಎಮ್. ಸಿ. ಮನಗುಳಿ,
   ತೋಟಗಾರಿಕೆ ಸಚಿವರು.

   **<u>ಅಗ್ರಿ ಡೈರಿ – 2019 ಬಿಡುಗಡೆ:</u>**

   ಎನ್. ಎಚ್. ಶಿವಶಂಕರ ರೆಡ್ಡಿ,
   ಕೃಷಿ ಸಚಿವರು.

   ದಿನಾಂಕ: 19–01–2019, ಶನಿವಾರ, ಸಮಯ: ಸಂಜೆ 4–00 ಗಂಟೆಗೆ.

   ಸ್ಥಳ: ತ್ರಿಪುರವಾಸಿನಿ, ಅರಮನೆ ಮೈದಾನ , ಮೇಖ್ರಿ ಸರ್ಕಲ್, ಬೆಂಗಳೂರು

2. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ – ಶ್ರೀ ಮಹಾಯೋಗಿ ವೇಮನ ಜಯಂತಿ:

**ಸಾನ್ನಿಧ್ಯ:**

ಶ್ರೀ ಶ್ರೀ ವೇಮನಾನಂದ ಮಹಾಸ್ವಾಮೀಜಿಯವರು
ರೆಡ್ಡಿ ಗುರುಪೀಠ, ಎರೆಹೊಸಹಳ್ಳಿ – ಹರಿಹರ, ದಾವಣಗೆರೆ ಜಿಲ್ಲೆ.

**ಗೌರವ ಉಪಸ್ಥಿತಿ:**

ಡಾ ಜಿ. ಪರಮೇಶ್ವರ್, ಉಪಮುಖ್ಯಮಂತ್ರಿಗಳು.

**ಉದ್ಘಾಟನೆ:**

ಡಿ.ಕೆ.ಶಿವಕುಮಾರ್,
ಜಲ ಸಂಪನ್ಮೂಲ (ಭಾರಿ ಮತ್ತು ಮಧ್ಯಮ ನೀರಾವರಿ) ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.

**ಮುಖ್ಯ ಅತಿಥಿಗಳು:**

ಎನ್.ಎಚ್. ಶಿವಶಂಕರ್‌ರೆಡ್ಡಿ,
ಕೃಷಿ ಸಚಿವರು.

ಎಂ. ಕೃಷ್ಣಾರೆಡ್ಡಿ,
ಮಾನ್ಯ ಉಪಸಭಾಧ್ಯಕ್ಷರು,
ಕರ್ನಾಟಕ ವಿಧಾನಸಭೆ,.

ಕೆ.ಸಿ. ರಾಮಮೂರ್ತಿ,
ಮಾನ್ಯ ರಾಜ್ಯಸಭಾ ಸದಸ್ಯರು

ಕುಪೇಂದ್ರರೆಡ್ಡಿ,
ಮಾನ್ಯ ರಾಜ್ಯಸಭಾ ಸದಸ್ಯರು.

**ಅಧ್ಯಕ್ಷತೆ:**

ಡಾ. ಉದಯ್ ಬಿ. ಗರುಡಾಚಾರ್,
ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ.

ದಿನಾಂಕ: 19–01–2019, ಶನಿವಾರ ಸಮಯ : ಸಂಜೆ 6–00 ಗಂಟೆಗೆ
ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ.ರಸ್ತೆ, ಬೆಂಗಳೂರು.

# <u>ಪತ್ರಿಕಾ ಪ್ರಕಟಣೆ</u>

**ಸರ್ಕಾರದ ಯೋಜನೆಗಳನ್ನು ಶೋಷಿತ ಸಮುದಾಯಗಳಿಗೆ ತಲುಪಿಸುವೆ : ಪ್ರಸಾದ್ ಅಬ್ಬಯ್ಯ**

**<u>ಬೆಂಗಳೂರು, ಜನವರಿ 18 ( ಕರ್ನಾಟಕ ವಾರ್ತೆ ) :</u>**

ಸರ್ಕಾರದ ವಿವಿಧ ಯೋಜನೆಗಳು ಹಾಗೂ ಕಾರ್ಯಕ್ರಮಗಳ ಲಾಭವನ್ನು ಶೋಷಿತ ಸಮುದಾಯಗಳ ಜನರಿಗೆ ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಡಾ ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಪ್ರಸಾದ್ ಅಬ್ಬಯ್ಯ ಅವರು ಇಲ್ಲಿ ಇಂದು ಪ್ರಕಟಿಸಿದರು.

ನಿಗಮದ ಅಧ್ಯಕ್ಷರಾಗಿ ನೂತನವಾಗಿ ಅಧಿಕಾರ ಸ್ವೀಕರಿಸಿದ ನಂತರ ಮಾಧ್ಯಮದವರೊಡನೆ ಮಾತನಾಡುತ್ತಿದ್ದ ಅವರು ಸರ್ವರಿಗೂ ಸಮಬಾಳು ಹಾಗೂ ಸರ್ವರಿಗೂ ಸಮಪಾಲು ಎಂಬ ಧೋರಣೆ ತಮ್ಮದಾಗಿದೆ. ಆದಕಾರಣ, ತುಳಿತಕ್ಕೆ ಒಳಗಾದ ಸಮುದಾಯಗಳ ಪ್ರಗತಿಗಾಗಿ ರಾಜ್ಯ ಸರ್ಕಾರವು ಬಿಡುಗಡೆ ಮಾಡುವ ಅನುದಾನ ಸದ್ಬಳಕೆಯಾಗಬೇಕು ಎಂಬುದು ತಮ್ಮ ನಿಲುವು. ಈ ಸಮುದಾಯಗಳ ಏಳಿಗೆಗಾಗಿ ನಿಗಮದ ಕಾರ್ಯಚಟುವಟಿಕೆಗಳನ್ನು ಮತ್ತಷ್ಟು ಚುರುಕುಗೊಳಿಸಿ ಅರ್ಹ ಫಲಾನುಭವಿಗಳ ಮನೆ ಬಾಗಿಲಿಗೇ ಸರ್ಕಾರದ ವಿವಿಧ ಸವಲತ್ತು ಹಾಗೂ ಸೌಲಭ್ಯಗಳನ್ನು ದೊರಕಿಸಿಕೊಡುವತ್ತ ಕ್ರಮ ಕೈಗೊಳ್ಳಲಾಗುವುದು. ಈ ನಿಟ್ಟಿನಲ್ಲಿ ನಿಗಮದ ಯೋಜನೆಗಳಲ್ಲಿ ಹೊಸತನ ತಂದು, ಕಾರ್ಯಕ್ರಮಗಳನ್ನು ಪುನಶ್ಚೇತನಗೊಳಿಸಲಾಗುವುದು ಎಂದರು.

ಸಮಾಜ ಕಲ್ಯಾಣ ಸಚಿವ ಪ್ರಿಯಾಂಕ್ ಖರ್ಗೆ, ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಬಿ ಜೆಡ್ ಜಮೀರ್ ಅಹಮದ್, ಪೌರಾಡಳಿತ ಸಚಿವ ಸಿ. ಎಸ್. ಶಿವಳ್ಳಿ, ರಾಜ್ಯ ವಿಧಾನ ಪರಿಷತ್‌ನ ಮಾಜಿ ಸಭಾಪತಿ ವೀರಣ್ಣ ಮತ್ತೀಕಟ್ಟಿ, ಮಾಜಿ ಸಚಿವರಾದ ಹೆಚ್ ಆಂಜನೇಯ ಮತ್ತು ವಿನಯ್ ಕುಲಕರ್ಣಿ ಮತ್ತಿತರು ಈ ಸಂದರ್ಭದಲ್ಲಿ ಹಾಜರಿದ್ದು, ಪ್ರಸಾದ್ ಅಬ್ಬಯ್ಯ ಅವರಿಗೆ ಶುಭ ಕೋರಿದರು.

---

ಡಿ ಪಿ ಎಂ

**<u>ಸಾವಯವ ಮತ್ತು ಸಿರಿಧಾನ್ಯಗಳಿಗೆ ಬೇಡಿಕೆ ಹೆಚ್ಚಳ : ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ</u>**

ಬೆಂಗಳೂರು, ಜನವರಿ 18 (ಕರ್ನಾಟಕ ವಾರ್ತೆ)

ಸಾವಯವ ಮತ್ತು ಸಿರಿಧಾನ್ಯಗಳಿಗೆ ಮತ್ತೆ ಬೇಡಿಕೆ ಹೆಚ್ಚಾಗಿದ್ದು, ಜನ ಇದನ್ನು ಹೆಚ್ಚು ಬಳಸಲು ಮುಂದಾಗಿದ್ದಾರೆ ಎಂದು ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ತಿಳಿಸಿದರು.

ಅವರು ಇಂದು ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ಸಾವಯವ ಮತ್ತು ಸಿರಿಧಾನ್ಯಗಳು–2019 ಅಂತರರಾಷ್ಟ್ರೀಯ ವಾಣಿಜ್ಯ ಮೇಳವನ್ನು ಉದ್ಘಾಟಿಸಿ ಮಾತನಾಡಿದರು.

ಆಹಾರ ಸುರಕ್ಷತೆ ಕಾಯ್ದೆಯಡಿ ಸಿರಿಧಾನ್ಯವನ್ನು ಸ್ವಾಭಾವಿಕ ಬೆಳೆ ಎಂದು ಗುರುತಿಸಲಾಗಿದೆ. ಜನರಿಗೆ ಸಿರಿಧಾನ್ಯಗಳ ಬಳಕೆ ಕುರಿತು ಅರಿವು ಮೂಡಿಸಲು ರೈತರು, ಕೈಗಾರಿಕೋದ್ಯಮಿಗಳನ್ನು ಒಂದೇ ಸೂರಿನಡಿ ತಂದು ವೇದಿಕೆ ನಿರ್ಮಾಣ ಮಾಡಲಾಗಿದೆ ಸಿರಿಧಾನ್ಯಗಳ ಬಳಕೆಯಿಂದ ನಮ್ಮ ಆರೋಗ್ಯ ಸಹ ಸುಧಾರಣೆಯಾಗಲಿದೆ. ಮಕ್ಕಳ ಮಧ್ಯಾಹ್ನದ ಬಿಸಿಯೂಟ ಹಾಗೂ ಇಂದಿರಾ ಕ್ಯಾಂಟೀನ್‌ಗಳಲ್ಲಿ ಸಹ ಸಿರಿಧಾನ್ಯಗಳನ್ನು ಬಳಸಲು ಸರ್ಕಾರ ಚಿಂತನೆ ನಡೆಸಿದೆ. ಇಲ್ಲಿ ರಾಜ್ಯ, ರಾಷ್ಟ್ರ ಹಾಗೂ ವಿದೇಶ ಮಟ್ಟದಲ್ಲಿ ಉದ್ದಿಮೆದಾರರು ಬಂದಿರುವುದು ಸಂತಸ ತಂದಿದೆ. ಇಂತಹ ದೊಡ್ಡ ಮಟ್ಟದ ಸಿರಿಧಾನ್ಯಗಳ ಮೇಳ ಇದೇ ಪ್ರಥಮ ಎಂದು ತಿಳಿಸಿದಲ್ಲದೆ ಎಲ್ಲರೂ ಈ ಮೇಳದ ಸದುಪಯೋಗ ಪಡೆದುಕೊಳ್ಳುವಂತೆ ಕರೆ ನೀಡಿದರು.

ಕಾರ್ಯಕ್ರಮ ಪ್ರಾಸ್ತಾವಿಕ ಭಾಷಣ ಮಾಡಿದ ಕೃಷಿ ಇಲಾಖೆ ಕಾರ್ಯದರ್ಶಿಗಳಾದ ಮಹೇಶ್ವರ್ ರಾವ್, ಈ ಸಿರಿಧಾನ್ಯಗಳ ಮೇಳವನ್ನು 3ನೇ ಬಾರಿ ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದು, ಇದರಿಂದ ಉತ್ತಮ ಪ್ರತಿಕ್ರಿಯೆ ಬಂದಿವೆ. ಜನರಿಗೆ ಸಿರಿಧಾನ್ಯಗಳಿಂದ ತಯಾರಿಸಿದ ಖಾದ್ಯ ಹಾಗೂ ಇದರಿಂದ ಆಗುವ ಪ್ರಯೋಜನದ ಬಗ್ಗೆ ಸಹ ಮಾಹಿತಿ ನೀಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕೃಷಿ ಸಚಿವ ಎನ್.ಎಚ್. ಶಿವಶಂಕರ ರೆಡ್ಡಿ, ಸಿರಿಧಾನ್ಯಗಳಿಂದ ಪೌಷ್ಠಿಕತೆ ದೊರೆಯಲಿದ್ದು, ದೇಹವನ್ನು ತಂಪಾಗಿ ಇರುವಂತೆ ಮಾಡುತ್ತದೆ. ಇದರಿಂದ ಮಧುಮೇಹ ಮುಂತಾದ ಕಾಯಿಲೆಗಳನ್ನು ತಡೆಯಬಹುದು. ಈ ವಾಣಿಜ್ಯ ಮೇಳದಲ್ಲಿ ಇತರ ರಾಜ್ಯ, ವಿದೇಶಗಳಿಂದಲೂ ಪ್ರತಿನಿಧಿಗಳು ಭಾವಹಿಸಿ ಮೇಳಕ್ಕೆ ಮೆರಗು ನೀಡಿದ್ದಾರೆ. ಈ ಮೇಳ ಯಶಸ್ವಿಯಾಗುವುದರಲ್ಲಿ ಸಂಶಯವಿಲ್ಲ ಎಂದರು.

ಕಾರ್ಯಕ್ರಮದಲ್ಲಿ ಸುಮಾರು 400 ರೂ ಹೆಚ್ಚಿನ ಮಳಿಗೆಗಳಲ್ಲಿ ಸಿರಿಧಾನ್ಯಗಳು ಹಾಗೂ ಅದರ ಉತ್ಪನ್ನಗಳು ಜನರನ್ನು ಕೈ ಬೀಸಿ ಕರೆಯುತ್ತಿತ್ತು. ಸಿರಿಧಾನ್ಯಗಳಿಂದ ತಯಾರಾದ ಖಾದ್ಯಗಳನ್ನು ಸಹ ಜನರು ಸವಿದರು. ಈ ಮೇಳವು ಜನವರಿ 18 ರಿಂದ 20 ರವರೆಗೆ ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ಆಯೋಜಿಸಲಾಗಿದೆ.

ಉದ್ಘಾಟನಾ ಕಾರ್ಯಕ್ರಮದಲ್ಲಿ ಸಚಿವರಾದ ಎಂ.ಸಿ. ಮನುಗುಳಿ, ಕೃಷ್ಣಬೈರೇಗೌಡ, ಹೆಚ್. ವೆಂಕಟ್‌ರಾವ್ ನಾಡಗೌಡ, ಕೇರಳ ಕೃಷಿ ಸಚಿವರಾದ ಸುನೀಲ್ ಪ್ರಭ, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀಮತಿ ಗಂಗಾಂಬಿಕಾದೇವಿ, ವಿಧಾನ ಪರಿಷತ್ ಸದಸ್ಯರಾದ ರೇವಣ್ಣ, ರಮೇಶ್ ಗೌಡ, ದೇವೇಗೌಡ, ಇಕ್ರಿಸ್ಯಾಟ್ ಡೈರೆಕ್ಟರ್ ಜನರಲ್ ಡಾ ಪೀಡರ್ ಕಾರ್ಬೆರಿ, ರಾಷ್ಟ್ರೀಯ ಮಳೆಯಾಶ್ರಿತ ಪ್ರದೇಶ ಪ್ರಾಧಿಕಾರ ಸಿ.ಇ.ಒ. ಡಾ.ಅಶೋಕ್ ದಳವಾಯಿ ಹಾಗೂ ಇತರರು ಉಪಸ್ಥಿತರಿದ್ದರು.

## ಶ್ರೀ ಮಹಾಯೋಗಿ ವೇಮನ ಜಯಂತಿ

**ಬೆಂಗಳೂರು, ಜನವರಿ 18 (ಕರ್ನಾಟಕ ವಾರ್ತೆ)**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜನವರಿ 19 ರಂದು ಸಂಜೆ 6–00 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ "ಶ್ರೀ ಮಹಾಯೋಗಿ ವೇಮನ ಜಯಂತಿ" ಯನ್ನು ಹಮ್ಮಿಕೊಳ್ಳಲಾಗಿದೆ.

ರೆಡ್ಡಿ ಗುರುಪೀಠ, ಎರೆಹೊಸಹಳ್ಳಿ, ಹರಿಹರ, ದಾವಣಗೆರೆ ಜಿಲ್ಲೆಯ ಶ್ರೀ ವೇಮನಾನಂದ ಮಹಾಸ್ವಾಮಿಯವರ ಸಾನ್ನಿಧ್ಯದಲ್ಲಿ ನಡೆಯಲಿದ್ದು, ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಗೌರವ ಉಪಸ್ಥಿತಿಯಾಗಿ ಪಾಲ್ಗೊಳ್ಳಲಿದ್ದಾರೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಲಸಂಪನ್ಮೂಲ ಸಚಿವರಾದ ಡಿ. ಕೆ. ಶಿವಕುಮಾರ್ ಅವರು ಸಮಾರಂಭವನ್ನು ಉದ್ಘಾಟಿಸಲಿದ್ದಾರೆ.

ಈ ಸಂದರ್ಭದಲ್ಲಿ ಕೃಷಿ ಸಚಿವ ಶಿವಶಂಕರ್ ರೆಡ್ಡಿ, ಕರ್ನಾಟಕ ವಿಧಾನ ಸಭೆ ಉಪಾಧ್ಯಕ್ಷ ಎಂ. ಕೃಷ್ಣಾರೆಡ್ಡಿ, ರಾಜ್ಯಸಭಾ ಸದಸ್ಯರುಗಳಾದ ಕೆ. ಸಿ. ರಾಮಮೂರ್ತಿ, ಕುಪೇಂದ್ರ ರೆಡ್ಡಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಡಾ ಉದಯ್ ಬಿ. ಗರುಡಾಚಾರ್ ಅವರು ಅಧ್ಯಕ್ಷತೆಯನ್ನು ವಹಿಸಲಿರುವ ಈ ಸಮಾರಂಭದಲ್ಲಿ ಮಾಜಿ ಸಚಿವರು, ಶಾಸಕರು, ಮಾಜಿ ವಿಧಾನಸಭಾ ಸದಸ್ಯರು ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ.

## ಫೆಬ್ರವರಿ 8 ರಿಂದ 12 ರವರೆಗೆ

### "ರಿಯಾಯಿತಿ ಕನ್ನಡ ಪುಸ್ತಕ ಮಾರಾಟ ಮೇಳ–2019"

ಬೆಂಗಳೂರು, ಜನವರಿ 18 (ಕರ್ನಾಟಕ ವಾರ್ತೆ)

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ ಫೆಬ್ರವರಿ 8 ರಿಂದ 12 ರವರೆಗೆ "ರಿಯಾಯಿತಿ ಕನ್ನಡ ಪುಸ್ತಕ ಮಾರಾಟ ಮೇಳ–2019" ವನ್ನು ರವೀಂದ್ರ ಕಲಾಕ್ಷೇತ್ರದ ಆವರಣ, ಜೆ.ಸಿ. ರಸ್ತೆ ಬೆಂಗಳೂರು ಇಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಪುಸ್ತಕ ಮೇಳದಲ್ಲಿ ಕನ್ನಡ ಪ್ರಕಾಶಕರು/ಮಾರಾಟಗಾರರು ಭಾಗವಹಿಸಬಹುದಾಗಿದ್ದು, ಮಳಿಗೆಯೊಂದಕ್ಕೆ ರೂ. 2,000/- ಗಳ ಭದ್ರತಾ ಠೇವಣಿ ಡಿ.ಡಿ. ಯನ್ನು ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ಅವರ ಹೆಸರಿನಲ್ಲಿ ಸಲ್ಲಿಸಬಹುದಾಗಿದೆ.

ಮೇಳದಲ್ಲಿ ಭಾಗವಹಿಸಲು ಇಚ್ಚಿಸುವ ಪ್ರಕಾಶಕರು/ಮಾರಾಟಗಾರರು ನಿಗದಿತ ಅರ್ಜಿ ನಮೂನೆಯನ್ನು ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರಿನ ಕಚೇರಿ ಅಥವಾ ಆಯಾ ಜಿಲ್ಲೆಯಲ್ಲಿರುವ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಚೇರಿಯಲ್ಲಿ ಅಥವಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಂದರೆ www.kannadapustakapradhikara.com ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ.

ಭರ್ತಿಮಾಡಿದ ಅರ್ಜಿಯನ್ನು ಡಿ.ಡಿ. ಯೊಂದಿಗೆ ದಿನಾಂಕ: 31-01-2019 ರಂದು ಸಂಜೆ 5-00 ಗಂಟೆಯೊಳಗೆ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸೆ, ಬೆಂಗಳೂರು ಅವರ ಹೆಸರಿಗೆ ಅಂಚೆಯ ಮೂಲಕ ಹಾಗೂ ಇ-ಮೇಲ್ kannadappradhikara@gmail.com ರ ಮೂಲಕ ಸಲ್ಲಿಸಬಹುದು. ನಿರ್ಮಿಸಲಾಗುವ 60 ಮಳಿಗೆಗಳನ್ನು ಆದ್ಯತೆಯ ಮೇರೆಗೆ ಹಂಚಿಕೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 ದೂರವಾಣಿ **080-22484516/22107704** ಅನ್ನು ಸಂಪರ್ಕಿಸಬಹುದಾಗಿದೆ.

## ಅರ್ಜಿ ಆಹ್ವಾನ

ಬೆಂಗಳೂರು, ಜನವರಿ 18 (ಕರ್ನಾಟಕ ವಾರ್ತೆ)

2018-19 ನೇ ಸಾಲಿನಲ್ಲಿ ಜನವರಿ 24 ರಿಂದ 31 ರವರೆಗೆ ತೋಟಗಾರಿಕೆ ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ಇಲ್ಲಿ ನಡೆಯುವ 6 (ಆರು) ದಿನಗಳ ಅವಧಿಯ ಭೂದೃಶ್ಯ ತೋಟಗಾರಿಕೆ ಅಭಿವೃದ್ಧಿ ಮತ್ತು ನಿರ್ವಹಣೆ ತರಬೇತಿಗೆ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿಗೆ ಆಯ್ಕೆಯಾಗಲು ಅಭ್ಯರ್ಥಿಯು ಕನಿಷ್ಠ 5ನೇ ತರಗತಿ ತೇರ್ಗಡೆಯಾಗಿರಬೇಕು ಕನ್ನಡ ಓದುವುದು ಬರೆಯುವುದು ಮತ್ತು ಮಾತನಾಡುವುದು ತಿಳಿದಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 35 ವರ್ಷ ಮತ್ತು ಇತರರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 33 ವರ್ಷ.

ಕೌಶಲ್ಯ ಅಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆರವರ ಅಧಿಕೃತ ವೆಬ್‌ಸೈಟ್‌ನಲ್ಲಿ ತೋಟಗಾರಿಕೆ ತರಬೇತಿಗಾಗಿ ದಾಖಲಿಸಿರುವ ಅಭ್ಯರ್ಥಿಗಳಿಗೆ ಮತ್ತು ರೈತ ಮಕ್ಕಳಿಗೆ ಆದ್ಯತೆ ನೀಡಲಾಗುವುದು. ಅಭ್ಯರ್ಥಿಗಳನ್ನು ಜೇಷ್ಠತೆ ಆಧಾರದ ಮೇಲೆ ತರಬೇತಿ ಪ್ರವೇಶವನ್ನು ನೀಡಲಾಗುವುದು.

ಅರ್ಜಿಗಳನ್ನು ಸಹಾಯಕ ತೋಟಗಾರಿಕೆ ನಿರ್ದೇಶಕರು, ತರಬೇತಿ ಕೇಂದ್ರ , ಲಾಲ್‌ಬಾಗ್, ಬೆಂಗಳೂರು ಅಥವಾ ಇಲಾಖಾ ವೆಬ್‌ಸೈಟ್ www.horticulture.kar.nic.in ನಲ್ಲಿ ದಿನಾಂಕ: 22-01-2019 ರವರೆಗೆ ಪಡೆಯಬಹುದಾಗಿರುತ್ತದೆ.

ಅಭ್ಯರ್ಥಿಗಳ ಅರ್ಜಿಗಳ ಪರಿಶೀಲನೆ ಮತ್ತು ಆಯ್ಕೆ ಪಟ್ಟಿ ಪ್ರಕಟಿಸುವ ದಿನಾಂಕ: 23-01-2019. ಭರ್ತಿಮಾಡಿದ ಅರ್ಜಿಗಳನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ದಿನಾಂಕ: 22-01-2019 ರಂದು ಸಂಜೆ 5-30 ಗಂಟೆಯೊಳಗೆ ಸಹಾಯಕ ತೋಟಗಾರಿಕೆ ನಿರ್ದೇಶಕರು, ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ರವರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9071280906 ಮತ್ತು 080-26564538 ಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಸಚಿವರಿಂದ ವಿವಿಧ ಜಿಲ್ಲೆಗಳಲ್ಲಿ ಉನ್ನತ ಮಟ್ಟದ ಸಭೆ

ಬೆಂಗಳೂರು, ಜನವರಿ 18 (ಕರ್ನಾಟಕ ವಾರ್ತೆ)

ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರಾದ ಶ್ರೀ ರಹೀಂ ಖಾನ್ ರವರು ಹೈದ್ರಾಬಾದ್-ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳಾದ ಬೀದರ್, ಯಾದಗಿರಿ, ರಾಯಚೂರು, ಕಲ್ಬುರ್ಗಿ, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿನ ಕ್ರೀಡಾಭಿವೃದ್ಧಿಗೆ ಸಂಬಂಧಿಸಿದಂತೆ ಉನ್ನತ ಮಟ್ಟದ ಸಭೆಯನ್ನು ಹಮ್ಮಿಕೊಂಡಿರುತ್ತಾರೆ.

**ದಿನಾಂಕ: 19-01-2019 ರಂದು ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೀದರ್ ಇಲ್ಲಿ ಪೂರ್ವಾಹ್ನ 11.00 ಗಂಟೆ**ಗೆ ನಡೆಯಲಿರುವ ಈ ಉನ್ನತ ಮಟ್ಟದ ಸಭೆಯಲ್ಲಿ ಡಾ. ಜಿ. ಕಲ್ಪನ, ಭಾ.ಆ.ಸೇ., ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶ್ರೀ ಕೆ. ಶ್ರೀನಿವಾಸ, ಭಾ.ಆ.ಸೇ., ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾಧಿಕಾರಿಗಳು, ಬೀದರ್, ಜಂಟಿ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸೇರಿದಂತೆ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಈ ಸಭೆಯಲ್ಲಿ

1. ಪ್ರಸ್ತುತ ಚಾಲ್ತಿಯಲ್ಲಿರುವ ಕಾಮಗಾರಿಗಳು ಮತ್ತು ಕಾರ್ಯಕ್ರಮಗಳ ಅನುಷ್ಠಾನದ ಪ್ರಗತಿ ಪರಿಶೀಲನೆ.
2. ಅಂತರ-ರಾಷ್ಟ್ರೀಯ ಗುಣಮಟ್ಟದ ಕ್ರೀಡಾ ಮೂಲಸೌಕರ್ಯಗಳನ್ನು ಸೃಜಿಸುವ ಬಗ್ಗೆ ಯೋಜನೆ ರೂಪಿಸುವುದು.
3. ಉತ್ತರ ಕರ್ನಾಟಕ ಭಾಗದ ಕ್ರೀಡಾಪಟುಗಳಿಗೆ ಮತ್ತು ಯುವಜನರಿಗೆ ಉಪಯುಕ್ತವಾಗುವ ಕಾರ್ಯಕ್ರಮಗಳನ್ನು ರೂಪಿಸುವುದು. ಅದರಲ್ಲೂ ಮುಖ್ಯವಾಗಿ ಯುವಜನರಿಗೆ ಉದ್ಯೋಗ ಸೃಷ್ಟಿಗೆ ಅವಕಾಶವಿರುವ ಸಾಹಸ ಕ್ರೀಡೆಗಳಲ್ಲಿ ತರಬೇತಿ ನೀಡುವ ಬಗ್ಗೆ ಯೋಜನೆ ರೂಪಿಸುವುದು.

4. ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕ್ರೀಡಾಭಿವೃದ್ಧಿ ಕಾರ್ಯಕ್ರಮಗಳಿಗಾಗಿ ಅನುದಾನ ಪಡೆಯುವುದು. ಮುಂತಾದ ವಿಷಯಗಳ ಕುರಿತು ಚರ್ಚೆ ನಡೆಯಲಿದೆ.

## ಡಿ.ಇ.ಎಲ್.ಇಡಿ/ಡಿ.ಇಡಿ ಪೂರಕ ಪರೀಕ್ಷೆಯ ಫಲಿತಾಂಶ ಪ್ರಕಟ

ಬೆಂಗಳೂರು, ಜನವರಿ 18 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಡಿಸೆಂಬರ್ – 2018 ರ ಮಾಹೆಯಲ್ಲಿ ನಡೆಸಿದ ಡಿ.ಇಎಲ್.ಇಡಿ/ಡಿ.ಇಡಿ ಪೂರಕ ಪರೀಕ್ಷೆಯ ಫಲಿತಾಂಶ ಪಟ್ಟಿಯನ್ನು ರಾಜ್ಯ ಎಲ್ಲಾ ಡಯಟ್‌ಗಳಿಗೆ ಕಳುಹಿಸಲಾಗಿದೆ.

ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ಆಯಾ ಡಯಟ್‌ಗಳಿಂದ ಫಲಿತಾಂಶ ಪಟ್ಟಿಯನ್ನು ಪಡೆದು ಜನವರಿ 22 ರಂದು ಬೆಳಿಗ್ಗೆ 10 ಗಂಟೆಗೆ ಫಲಿತಾಂಶವನ್ನು ಆಯಾ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸುವಂತೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಪ್ರಕಟಣೆ ತಿಳಿಸಿದೆ.

## ನಾಟಕ ಅಕಾಡೆಮಿಯ ಸಂಶೋಧನಾ ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಜನವರಿ 18 (ಕರ್ನಾಟಕ ವಾರ್ತೆ)

ಕರ್ನಾಟಕ ನಾಟಕ ಅಕಾಡೆಮಿಯು ಗಿರಿಜನ ಉಪಯೋಜನೆಯಡಿ 11 ಜನ ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಿಗೆ ಸಂಶೋಧನಾ ಪ್ರಬಂಧ ರಚನಾ ಫೆಲೋಶಿಪ್ ಕೊಡುತ್ತದೆ. ಪ್ರತಿ ಫೆಲೋಶಿಫ್‌ಗೆ ರೂ 1.00 ಲಕ್ಷಗಳ ಸಂಭಾವನೆ ನೀಡಲಾಗುತ್ತದೆ. ಪರಿಶಿಷ್ಟ ಪಂಗಡದವರು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು ಫೆಲೋಶಿಪ್ ಕುರಿತ ಅರ್ಜಿ, ನಿಬಂಧನೆಗಳು ಮತ್ತು ವಿವರಗಳಿಗಾಗಿ ಕರ್ನಾಟಕ ನಾಟಕ ಅಕಾಡೆಮಿಯ ವೆಬ್‌ಸೈಟ್ http://karnatakanatakaacademy.com ಅನ್ನು ಸಂಪರ್ಕಿಸುವುದು. ಅರ್ಜಿ ಮತ್ತು ಡಿ.ಟಿ.ಪಿ. ಮಾಡಿಸಿದ ಸಾರಲೇಖವನ್ನು ಅಂಚೆ ಮೂಲಕ ರಿಜಿಸ್ಟ್ರಾರ್, ಕರ್ನಾಟಕ ನಾಟಕ ಅಕಾಡೆಮಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002, ದೂರವಾಣಿ ಸಂಖ್ಯೆ 22237484 ಈ ವಿಳಾಸಕ್ಕೆ ಫೆಬ್ರವರಿ 4 ರೊಳಗೆ ಸಲ್ಲಿಸಬಹುದಾಗಿದೆ.

ಫೆಬ್ರವರಿ 2 ರಿಂದ 10 ರವರೆಗೆ

## ಕೆ.ಆರ್. ಪುರಂ ಪ್ರಾದೇಶಿಕ ಕಚೇರಿಯ ವಾಹನ್-1 ರ ಎಲ್ಲಾ ಸೇವೆಗಳು ಸ್ಥಗಿತ

ಬೆಂಗಳೂರು, ಜನವರಿ 14 (ಕರ್ನಾಟಕ ವಾರ್ತೆ)

ಕೇಂದ್ರ ಸರ್ಕಾರದ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಇಲಾಖೆಯು ಎನ್.ಐ.ಸಿ.ಯವರ ತಾಂತ್ರಿಕ ನೆರವಿನಿಂದ ಅಭಿವೃದ್ಧಿಗೊಳಿಸಿರುವ ವಾಹನಗಳ ನೋಂದಣಿ ಸೇವೆಗಳಿಗೆ ಸಂಬಂಧಿಸಿದ ಕೇಂದ್ರೀಕೃತ ಹಾಗೂ ವೆಬ್ ಆಧಾರಿತ ವಾಹನ್ -4 ತಂತ್ರಾಂಶವನ್ನು ರಾಜ್ಯದ ಎಲ್ಲಾ ಪ್ರಾದೇಶಿಕ ಸಾರಿಗೆ ಕಚೇರಿಗಳಲ್ಲಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಉಪಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, **ಕೆ.ಆರ್. ಪುರಂ**_ಇಲ್ಲಿ ದಿನಾಂಕ: 02-02-2019 ರಂದು ವಾಹನ್ -4 ಪ್ರಾರಂಭಿಸಲು ತೀರ್ಮಾನಿಸಲಾಗಿರುತ್ತದೆ.

ಅದರಂತೆ ವಾಹನ್-4 ತಂತ್ರಾಂಶವನ್ನು ಅಳವಡಿಸಲು ಪೂರ್ವಸಿದ್ಧತೆಗಾಗಿ ದಿನಾಂಕ: 02-02-2019 ರಿಂದ 10-02-2019 ರವರೆಗೆ ವಾಹನ್-1 ರಲ್ಲಿ ಎಲ್ಲಾ ಸೇವೆಗಳನ್ನು ಸ್ಥಗಿತಗೊಳಿಸಲಾಗುತ್ತಿದೆ. ಹೀಗಾಗಿ ಮೋಟಾರು ವಾಹನಗಳ ವಿವಿಧ ಕೆಲಸ ಕಾರ್ಯಗಳಿಗಾಗಿ (ಮೋಟಾರು ವಾಹನಗಳ ಹೊಸ ನೋಂದಣಿ, ವಾಹನದ ವರ್ಗಾವಣೆ, ವಿಳಾಸ ಬದಲಾವಣೆ, ಕಂತು ಕರಾರು ನಮೂದು/ರದ್ಧತಿ, ಎಫ್.ಸಿ, ನೋಂದಣಿ ಪತ್ರ ನವೀಕರಣ, ಸಿ.ಸಿ., ಎನ್.ಓ.ಸಿ., ವಾಹನ ಸಂಖ್ಯೆ ಮತು ನೋಂದಣಿ, ನಕಲು ನೋಂದಣಿ, ರಹದಾರಿ ನೀಡುವಿಕೆ/ನವೀಕರಣ ಮತ್ತು ಮೋಟಾರು ವಾಹನಗಳಿಗೆ ಈಗಾಗಲೇ ಅರ್ಜಿಯನ್ನು ಸಲ್ಲಿಸಿರುವವರು ಫೆಬ್ರವರಿ 1 ರೊಳಗೆ ಕೆಲಸವನ್ನು ಮುಗಿಸಿಕೊಳ್ಳಬೇಕಾಗಿದೆ.

ದಿನಾಂಕ: 02-02-2019 ರಿಂದ 10-02-2019 ರ ಅವಧಿಯಲ್ಲಿ ಬರುವ ತೆರಿಗೆ ಪಾವತಿ ಅರ್ಹತಾ ಪತ್ರ ನವೀಕರಣ/ಚಾಲನಾ ಪತ್ರ ಮತ್ತು ನೊಂದಣಿ ಪತ್ರ ನವೀಕರಣ ಮುಂತಾದ ಕೆಲಸಗಳನ್ನು ಮೇಲ್ಕಂಡ ಅವಧಿಗೆ ಮುನ್ನವೇ ನವೀಕರಿಸಿಕೊಳ್ಳಲು ಒಂದು ವೇಳೆ ಈ ಅವಧಿಯ ನಂತರ ಬಂದಲ್ಲಿ ವಿಳಂಬ ಶುಲ್ಕ ಪಾವತಿಸಬೇಕಾಗಿರುತ್ತದೆ. ಆದ್ದರಿಂದ ಸಾರ್ವಜನಿಕರು ಮೇಲ್ಕಂಡ ಕೆಲಸವನ್ನು ಅವಧಿಯ ಮುನ್ನವೇ ನವೀಕರಿಸಿಕೊಳ್ಳಲು ಸಾರ್ವಜನಿಕರಲ್ಲಿ ಉಪ ಸಾರಿಗೆ ಆಯುಕ್ತರು ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿ, ಕೆ.ಆರ್. ಪುರಂ, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# <u>ಪರಿಶಿಷ್ಟ ಜಾತಿಯ ಪತ್ರಿಕೋದ್ಯಮ ಪದವಿ/ಸ್ನಾತಕೋತ್ತರ ಪದವೀಧರರಿಂದ ಏಳು ತಿಂಗಳ ಅಪ್ರೆಂಟಿಷಿಪ್ ತರಬೇತಿಗಾಗಿ ಅರ್ಜಿ ಆಹ್ವಾನ</u>

**ಬೆಂಗಳೂರು ಜ.18 (ಕರ್ನಾಟಕ ವಾರ್ತೆ):**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಮಾಧ್ಯಮ ಅಕಾಡೆಮಿ ವತಿಯಿಂದ,** 2018-19ನೇ ಸಾಲಿನ ಎಸ್‌ಸಿಎಸ್‌ಪಿ ಉಪಯೋಜನೆಯಡಿ, ಜಿಲ್ಲಾ ಕಛೇರಿಗಳಲ್ಲಿ ಕ್ಷೇತ್ರ ಪ್ರಚಾರ ಹಾಗೂ ಮಾಧ್ಯಮ ತರಬೇತಿ ನೀಡಲು, ಪತ್ರಿಕೋದ್ಯಮದಲ್ಲಿ ಪದವಿ/ ಸ್ನಾತಕೋತ್ತರ ಪದವಿ ಪಡೆದಿರುವ ಜಿಲ್ಲೆಯ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪತ್ರಿಕೋದ್ಯಮ ಅಪ್ರೆಂಟಿಷಿಪ್ ತರಬೇತಿಯು 07 ತಿಂಗಳ ಅವಧಿಯದ್ದಾಗಿರುತ್ತದೆ. ಮೆರಿಟ್ ಆಧಾರದ ಮೇಲೆ ಆಯ್ಕೆಯಾಗುವ ಇಬ್ಬರು ಅಭ್ಯರ್ಥಿಗಳಿಗೆ ತಿಂಗಳಿಗೆ ತಲಾ ರೂ.15,000/- ಸ್ಟೈಫಂಡ್‌ನ್ನು ಕರ್ನಾಟಕ ಮಾಧ್ಯ.ಮ ಅಕಾಡೆಮಿ ಮೂಲಕ ನೀಡಲಾಗುವುದು.

ಅರ್ಜಿಯೊಂದಿಗೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಪದವಿ/ಸ್ನಾತಕೋತ್ತರ ಪದವಿ ಪ್ರಮಾಣಪತ್ರ, ಜಾತಿ ಪ್ರಮಾಣ ಪತ್ರ, ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರ ಹಾಗೂ ಇನ್ನಿತರ ದಾಖಲೆಗಳನ್ನು ದ್ವಿಪ್ರತಿಯಲ್ಲಿ ಸಲ್ಲಿಸಲು **ಜನವರಿ 25** ಕೊನೆಯ ದಿನವಾಗಿದೆ.

ಆಸಕ್ತರು, ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ **ಉಪನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ನಗರ ಜಿಲ್ಲೆ, ಎರಡನೇ ಮಹಡಿ, ನಂ.17, ಭಗವಾನ್ ಮಹಾವೀರ ರಸ್ತೆ, (ಇನ್‌ಫೆಂಟ್ರಿ ರಸ್ತೆ) ಬೆಂಗಳೂರು-560001.** ದೂರವಾಣಿ ಸಂಖ್ಯೆ : 080-22028058/22028059 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಉಪನಿರ್ದೇಶಕ ಡಿ.ಪಿ.ಮುರಳೀಧರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.